**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊನ್ನಾವರ**

**ಫೌಜುದಾರಿ ಪ್ರಕರಣ ಸಂಖ್ಯೆ : 91/2020**

**ಚಾ.ಸಾಃ 25, ಫ್ರಾ.ಸಾಃ 13**

| | |
|---|---|
| ಸಾಕ್ಷಿದಾರನ ಹೆಸರು | ಚೆಲುವರಾಜು |
| ತಂದೆಯ ಹೆಸರು | ಬೆಟ್ಟೆಗೌಡ |
| ವಯಸ್ಸು | 49 ವರ್ಷಗಳು |
| ಉದ್ಯೋಗ | ಡಿ.ವೈ.ಎಸ್.ಪಿ., ನಾಗಮಂಗಲ |
| ವಾಸ್ತವ್ಯ | ನಾಗಮಂಗಲ |

**ಸಾಕ್ಷಿಯನ್ನು ದಿನಾಂಕಃ 15-03-2025ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎಪಿಪಿಯವರಿಂದ,**

ನಾನು ಡಿಸೆಂಬರ-2017ರಿಂದ ಸಪ್ಟಂಬರ-2019ರ ವರೆಗೆ ಹೊನ್ನಾವರ ವೃತ್ತದಲ್ಲಿ ವೃತ್ತ ನಿರೀಕ್ಷಕನಾಗಿ ಕೆಲಸ ಮಾಡಿರುತ್ತೇನೆ.

ಈ ಪ್ರಕರಣದ ಕಡತವನ್ನು ದಿನಾಂಕಃ **30-05-2019**ರಂದು ಚಾಸಾ-24ರವರಿಂದ ಪಡೆದುಕೊಂಡು ಅದೇ ದಿನ ಘಟನಾ ಸ್ಥಳಕ್ಕೆ ಭೇಟಿ ನೀಡಿ ಪಿರ್ಯಾದುದಾರರು ತೋರಿಸಿದ ಸ್ಥಳದಲ್ಲಿ ಪಂಚರ ಸಮಕ್ಷಮ ಸ್ಥಳ ಪಂಚನಾಮೆ ತಯಾರಿಸಿ ಸ್ಥಳದ ಒಂದು ಕಚ್ಚಾ ನಕಾಶೆ ತಯಾರಿಸಿ 2 ಫೋಟೋ ತೆಗೆಸಿರುತ್ತೇನೆ. ಸ್ಥಳ ಪಂಚನಾಮೆಯನ್ನು ನೋಡುತ್ತಿದ್ದು ನಿಪಿ-1 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-1(ಸಿ) ಎಂದು, ಕಚ್ಚಾ ನಕಾಶೆಯನ್ನು ನೋಡುತ್ತಿದ್ದು ನಿಪಿ-2 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-2(ಸಿ) ಎಂದು, 2 ಫೋಟೋಗಳನ್ನು ಗುರುತಿಸಿದ್ದು ನಿಪಿ-3 ಮತ್ತು 4 ಎಂದು ಗುರುತಿಸಲಾಗಿದೆ.

ಅದೇ ದಿನ ಚಾಸಾ-10ರವರ ಹೇಳಿಕೆ ಪಡೆದಿರುತ್ತೇನೆ.

ನಂತರ ಕೇಸಿನ ಕಡತವನ್ನು ಚಾಸಾ-26ರವರಿಗೆ ವಹಿಸಿರುತ್ತೇನೆ.

**ಪಾಟೀ ಸವಾಲುಃ ಆರೋಪಿಗಳ ಪರ ವಕೀಲರಾದ ಶ್ರೀ ವಿ. ಎಂ. ಭಂಡಾರಿಯವರಿಂದಃ**

ನಾನು ಸ್ಥಳಕ್ಕೆ ಭೇಟಿನೀಡಿದ ನಂತರ ಪಂಚರನ್ನು ಸಿಬ್ಬಂದಿಯ ಮೂಲಕ ಬರಮಾಡಿಕೊಂಡಿರುತ್ತೇನೆ. ಪಂಚನಾಮೆಯ ಕಾಲಕ್ಕೆ ಸ್ಥಳದಲ್ಲಿ ಯಾವುದೇ ಬೀಗದ ಕೀ ದೊರೆತಿರುವುದಿಲ್ಲ. ಪಂಚನಾಮೆಯ ಕಾಲಕ್ಕೆ ಸ್ಥಳದಲ್ಲಿ 5-6 ಜನ ಸೇರಿದ್ದರು. ನಾನು ಪಿರ್ಯಾದುದಾರರ ಮನೆಗೆ ಹೋಗಿ ಯಾವುದೇ ಪಂಚನಾಮೆ ಮಾಡಿಲ್ಲ ಎಂದರೆ ಸರಿಯಲ್ಲ. ಠಾಣೆಯಲ್ಲಿ ಪಂಚನಾಮೆ ತಯಾರಿಸಿದ್ದೇನೆ ಎಂದರೆ ಸರಿಯಲ್ಲ. ಯಾವುದೇ ಸಾಕ್ಷಿದಾರರ ಹೇಳಿಕೆ

ಪಡೆದಿಲ್ಲ ಎಂದರೆ ಸರಿಯಲ್ಲ. ಪಿರ್ಯಾದಿಯ ಮನೆಯಲ್ಲಿ ಯಾವುದೇ ಕಳ್ಳತನ ಆಗಿಲ್ಲ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇರುವುದಿಲ್ಲ.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ.

**ಸಹಿ ಇದೆ.**

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**